ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 47 ಮುನೋಮು 2016

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:05-10-2016

<u>ಸುತ್ತೋಲೆ</u>

ವಿಷಯ: ಜಮೀನಿನ ಸರ್ವೆ ನಕ್ಷೆ (ಸ್ಕೆಚ್) – ನಮೂನೆ-11ಇ ಪಡೆದು ಕೃಷಿ ಭೂಮಿಗಳನ್ನು ನೋಂದಣಿ ಮಾಡುವಾಗ ಅನುಸರಿಸುವ ಕ್ರಮ.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ 344 ಮುನೋಮು 2008 ದಿನಾಂಕ: 06-04-2009.

* * *

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸುತ್ತೋಲೆಯಲ್ಲಿ ಕೃಷಿ ಜಮೀನಿನ ವರ್ಗಾವಣೆ ಪತ್ರಗಳ ನೋಂದಣಿ ಸಮಯದಲ್ಲಿ ಜಮೀನಿನ ಸರ್ವೆ ನಕ್ಷೆ (ಸ್ಕೆಚ್) – ನಮೂನೆ-11ಇ (ಕರ್ನಾಟಕ ಭೂ ಕಂದಾಯ ಕಾಯ್ದೆ 1961ರ ಕಲಂ 131(ಸಿ) ಹಾಗೂ ಕರ್ನಾಟಕ ಭೂ ಕಂದಾಯ ನಿಯಮಗಳ ನಿಯಮ 46(ಎಚ್) ರಡಿ ವಿಧಿಸಿರುವಂತೆ) ಪಡೆದು ನೋಂದಾಯಿಸಲು ನಿರ್ದೇಶನ ನೀಡಲಾಗಿದೆ.

ಕಾವೇರಿ ತಂತ್ರಾಂಶ ಮತ್ತು ಜಮೀನಿನ ಸರ್ವೆ ನಕ್ಷೆ (ಸ್ಕೆಚ್) – ನಮೂನೆ-11ಇ ಇರುವ "ಮೋಜಣಿ" ತಂತ್ರಾಂಶವನ್ನು ಸಂಯೋಜನೆಗೊಳಿಸಿರುವುದರಿಂದ, ದಿನಾಂಕ: 05-10-2016 ರಿಂದ ಕೃಷಿ ಜಮೀನಿನ ನೋಂದಣಿಗೆ "ಭೂಮಿ" ತಂತ್ರಾಂಶದಿಂದ ಮಾಹಿತಿ ಪಡೆದು ನೋಂದಣಿ ಮಾಡುವ ವಿಧಾನದಲ್ಲೇ, ಜಮೀನಿನ ಸರ್ವೆ ನಕ್ಷೆ (ಸ್ಕೆಚ್) – ನಮೂನೆ-11ಇ ಇರುವ "ಮೋಜಣಿ" ತಂತ್ರಾಂಶದಿಂದ ಮಾಹಿತಿ ಪಡೆದು ನೋಂದಣಿ ಮಾಡಲು ಆದೇಶಿಸಿದೆ.

ಒಂದು ವೇಳೆ "ಮೋಜಣಿ" ತಂತ್ರಾಂಶದಿಂದ ಮಾಹಿತಿ ಲಭ್ಯವಿಲ್ಲದಿದ್ದಲ್ಲಿ, ಕಾವೇರಿ ತಂತ್ರಾಂಶದಿಂದ ಉತ್ಪತ್ತಿಯಾಗುವ ಹಿಂಬರಹವನ್ನು ದಸ್ತಾವೇಜು ಹಾಜರುಪಡಿಸುವ ಪಕ್ಷಕಾರರಿಗೆ ನೀಡಲು ಸೂಚಿಸಿದೆ.

ಇದನ್ನು ಹೊರತುಪಡಿಸಿ, ಬೇರೆ ಯಾವುದೇ ವಿಧಾನದಲ್ಲಿ ನೋಂದಣಿ ಮಾಡಿದಲ್ಲಿ ಅಂತಹ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ನಾರಾಯಣಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ (ನೋ & ಮು).

ಇವರಿಗೆ
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು–ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.

Kaveri - mojini integration